# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ ನಂ.1063/2016**

ಫಿರ್ಯಾದಿಃ ಕರ್ನಾಟಕ ಸರಕಾರ ಪರ ಸೇಡಂ ಪೊಲೀಸ್ ಠಾಣೆ.

-ಃಃ ವಿರುದ್ಧ ಃಃ-

ಆರೋಪಿಃ ರಾಮ ತಂದೆ ಕಿಶನ ಜಾಧವ,
ವಃ 23 ವರ್ಷ, ಉಃ ಕೂಲಿ ಕೆಲಸ,
ಸಾಃ ಬಸವ ನಗರ, ಸೇಡಂ.

----

ದೋಷಾರೋಪಣೆ

ನಾನು ಶ್ರೀ ಸುನೀಲ್.ಎಸ್.ತಳವಾರ, ಬಿ.ಎ. ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ಆರೋಪಿತನಾದ ನೀನು ದಿನಾಂಕ 17.02.2016 ರಂದು ಮಧ್ಯಾಹ್ನ 1.00 ಗಂಟೆ ಸುಮಾರಿಗೆ ಸೇಡಂ ಪೊಲೀಸ್ ಠಾಣಾ ಹದ್ದಿಯಲ್ಲಿರುವ ಸೇಡಂ ಪಟ್ಟಣದ ಬಸವನಗರದ ದರ್ಗಾ ಹತ್ತಿರ ನೀನು ಅಕ್ರಮವಾಗಿ ಕಲಬೆರಕೆ ಸೇಂದಿ ಯಾವುದೇ ಪರವಾನಿಗೆ ಇಲ್ಲದೇ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದಾಗ, ಚಾಸಾ.1, 4, 5 ನೇದ್ದವರು ಕೂಡಿಕೊಂಡು, ಚಾಸಾ.2 ಮತ್ತು 3 ನೇದ್ದವರ ಸಮಕ್ಷಮದಲ್ಲಿ ದಾಳಿ ಮಾಡಿ ನಿನ್ನ ವಶದಲ್ಲಿದ್ದ 1 ಲೀಟರಿನ ಒಟ್ಟು 25 ಲೀಟರ್ ಕಲಬೆರಕೆ ಸೇಂದಿ ಪಾಕೆಟಗಳನ್ನು ವಶಪಡಿಸಿಕೊಂಡಿದ್ದು, ಅಲ್ಲದೇ ಸದರಿ ಕಲಬೆರಕೆ ಸೇಂದಿ ಸೇವನೆಯಿಂದ ಮಾನವ ಜೀವಕ್ಕೆ ಹಾನಿಯಾಗುತ್ತದೆಂದು ಗೊತ್ತಿದ್ದರೂ ಸಹ ಕಲಬೆರಕೆ ಸೇಂದಿ ಮಾರಾಟ ಮಾಡಲು ಸಂಗ್ರಹಿಸಿಟ್ಟಿದ್ದು, ಕಾರಣ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ಹಾಗೂ ಭಾ.ದಂ.ಸಂ. 273 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ದಿನಾಂಕಃ 12-01-2023

೨೭/೦೨/೨೪

ಪ್ರ.ದ.ನ್ಯಾದಂ. ಸೇಡಂ.